ಆ) ರಾಜ್ಯದಲ್ಲಿ ಪೈಲಟ್ ಯೋಜನೆಗೆ ಯಾವ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ,

ಇ) ಎಷ್ಟು ಕೊಳವೆಬಾವಿಗಳು ಈ ಯೋಜನೆಗೆ ಸೀಮಿತಗೊಂಡಿವೆ (ವಿವರಗಳನ್ನು ಒದಗಿಸುವುದು) ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –

ಅ) ಪರಿಶೀಲನೆಯಲ್ಲಿದೆ

ಆ) ಪ್ರಶ್ನೆ (ಅ)ಗೆ ನೀಡಿದ ಉತ್ತರದ ಹಿನ್ನೆಲೆಯಲ್ಲಿ ಇದು ಉದ್ಭವಿಸುವುದಿಲ್ಲ

ದೇವರ ಭೂಪುರ ಗ್ರಾಮದ ಮೂರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪ್ರಾರಂಭಿಸುವುದು

619 (640) ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪುರ (ಲಿಂಗಸುಗೂರು) .– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ ?

ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ದೇವರಭೂಪುರ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡವನ್ನು ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಲಾಗಿದೆಯೇ ,

ಆ) ಕೃಷ್ಣಾ ಭಾಗ್ಯ ಜಲ ನಿಗಮದವರು ದೇವರಭೂಪುರ ಗ್ರಾಮದ ಅವರ ವಶದಲ್ಲಿರುವ ಉಚಿತ ನಿವೇಶನವನ್ನು ತೆಗೆದುಕೊಳ್ಳುವ ಬಗ್ಗೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆಯೇ ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –

ಅ) ಗುರುತಿಸಲಾಗಿದೆ

ಆ) ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ

620 (153) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) – ಮಾನ್ಯ ಶ್ರೀ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯ ಅತ್ಯಾಧುನಿಕ ಉಪಕರಣ ಇತ್ಯಾದಿಗಳಿಗೆ 2005–06 ಹಾಗೂ 2006–07ರಲ್ಲಿ ಖರ್ಚು ಮಾಡಿದ ಹಣವೆಷ್ಟು ,

ಆ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಹಾಗಿದ್ದಲ್ಲಿ, ಈ ಖಾಲಿ ಇರತಕ್ಕಂತ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ,

ಈ) 2007–08ರಲ್ಲಿ ಮೂಲಭೂತ ಸೌಕರ್ಯ ಇತ್ಯಾದಿಗಳನ್ನು ಒದಗಿಸಲು ಖರ್ಚು ಮಾಡಲಿರುವ ಹಣವೆಷ್ಟು ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಕ್ಕಾಗಿ 2005-06 ರಲ್ಲಿ ರೂ 16,72,125 ಹಾಗೂ 2006–07ರಲ್ಲಿ ರೂ 15,97,936 ಹಣವನ್ನು ಖರ್ಚು ಮಾಡಲಾಗಿದೆ ಅತ್ಯಾಧುನಿಕ ಉಪಕರಣಗಳಿಗಾಗಿ 2005–06ರಲ್ಲಿ ರೂ 92,10,538 ಹಾಗೂ 2006–07ರಲ್ಲಿ ರೂ 1,46,640 ಹಣವನ್ನು ಖರ್ಚು ಮಾಡಲಾಗಿದೆ

ಆ) ಬಂದಿದೆ

ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ 27 ವೈದ್ಯರ ಹುದ್ದೆ ಮಂಜೂರಾಗಿದ್ದು 18 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ 9 ವೈದ್ಯರ ಹುದ್ದೆ ಖಾಲಿ ಇರುತ್ತವೆ ಇತರೆ ಸಿಬ್ಬಂದಿಗಳ 291 ಹುದ್ದೆ ಮಂಜೂರಾಗಿದ್ದು 230 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 61 ಸಿಬ್ಬಂದಿಗಳ ಹುದ್ದೆ ಖಾಲಿ ಇದೆ

ಇ) ವಿಶೇಷ ನೇರ ನೇಮಕಾತಿಯಿಂದ 500 ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇಮಕ ಮಾಡಲು ಅನುಮತಿ ನೀಡಲಾಗಿದ್ದು ಅದರಲ್ಲಿ ಈಗಾಗಲೇ 250 ವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ ಉಳಿದ 250 ವೈದ್ಯಾಧಿಕಾರಿಗಳ ಹುದ್ದೆಯ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ ಹಾಗೂ ಗುತ್ತಿಗೆ ಆಧಾರದ ಮೇಲೆ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಹಾಗೂ 2807 ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ನೇಮಕಾತಿ ಮಾಡಲು ನೇಮಕಾತಿ ಕಾರ್ಯ ಅಂತಿಮ ಹಂತದಲ್ಲಿದ್ದು ನೇಮಕಾತಿ ಕಾರ್ಯ ಮುಗಿದ ಕೂಡಲೇ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು

ಈ) 2007–08ರಲ್ಲಿ ಮೂಲಭೂತ ಸೌಕರ್ಯ ಇತ್ಯಾದಿಗಳನ್ನು ಒದಗಿಸಲು ಖರ್ಚು ಮಾಡಲಿರುವ ಹಣ ಸುಮಾರು ರೂ 65,00,000

ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಪ್ರಾರಂಭಿಸುವುದು

621 (713) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) – ಮಾನ್ಯ ಶ್ರೀ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ತಿಳಿಸುವರೇ ?

ಅ) ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿರುವ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ಸಂಖ್ಯೆ ಎಷ್ಟು ,

ಆ) ಯಾವ ಯಾವ ಊರುಗಳಲ್ಲಿ ಸದರಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ,

ಇ) ಮುದ್ದೇಬಿಹಾಳ್ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಬಡಜನರು ಹೆಚ್ಚಿನ ಸಂಖ್ಯೆಯಲ್ಲಿದ್ದು ಈವರೆವಿಗೂ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಮುಂದೂಡಲು ಕಾರಣವೇನು ,